**ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಬೈಲಹೊಂಗಲ**

**ಸಿ.ಸಿ. ನಂ.570/2021**

**ಚಾ.ಸಾ. -3**

**ಪ್ರಾ.ಸಾ. -6**

**ಸಾಕ್ಷಿದಾರರ ಹೆಸರು** ಃ ಮಂಜುನಾಥ ಲಕ್ಷ್ಮಣರಾವ ಜಾದವ

**ಸಾಕ್ಷಿದಾರರ ವಯಸ್ಸು** ಃ 35 ವರ್ಷ

**ಸಾಕ್ಷಿದಾರರ ಉದ್ಯೋಗ**ಃ ವ್ಯವಸಾಯ

**ಸಾಕ್ಷಿದಾರರ ವಿಳಾಸ** ಃ ಬೆಳವಡಿ

---

**ಪ್ರಮಾಣ ವಚನ ಮಾಡಿದ ದಿನಾಂಕ ಃ 08-08-2022**

**ಮುಖ್ಯ ವಿಚಾರಣೆ ಃ ಎಪಿಪಿ ಅವರಿಂದ**

ಚಾಸಾ-2 ರವರ ಪರಿಚಯ ಇರುವುದಿಲ್ಲ. ಈಗ ಸುಮಾರು ಒಂದು ವರ್ಷದ ಹಿಂದೆಪೊಲೀಸರು ದೊಡ್ಡವಾಡ ಪೊಲೀಸಠಾಣೆಗೆ ಕರೆಯಿಸಿ ಒಂದು ದಾಖಲೆಯ ಮೇಲೆ ನನ್ನ ಸಹಿ ಪಡೆದಿರುತ್ತಾರೆ. ಅದರಲ್ಲಿ ಏನು ಬರೆದಿರುತ್ತಾರೆ ಎನ್ನುವುದು ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ-1 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ಪೊಲೀಸರು ನನ್ನನ್ನು ಎಲ್ಲಿಯೂ ಕರೆದುಕೊಂಡು ಹೋಗಿರುವುದಿಲ್ಲ ಮತ್ತು ಆರೋಪಿಯನ್ನು ದಾಳಿ ಮಾಡಿ ಹಿಡಿದು ಆತನಿಂದ ಯಾವುದೇ ವಸ್ತುಗಳನ್ನು ಜಪ್ತಿಮಾಡಿ ವಶಪಡಿಸಿಕೊಂಡಿರುವುದಿಲ್ಲ. ಆರೋಪಿಯನ್ನು ಈ ಮೊದಲು ಎಲ್ಲಿಯೂ ನೋಡಿರುವುದಿಲ್ಲ.

**( ಈ ಹಂತದಲ್ಲಿ ಸಾಕ್ಷಿಯನ್ನು ಅಭಿಯೋಜಕರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದರು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು ಃ ಎಪಿಪಿ ಅವರಿಂದ**

ದಿಃ 8.10.2020 ರಂದು ಪೊಲೀಸರು ನನ್ನನ್ನು ದೊಡ್ಡವಾಡ ಪೊಲೀಸಠಾಣೆಗೆ ಕರೆಯಿಸಿ ಚಿಕ್ಕಬೆಳ್ಳಿಕಟ್ಟಿ ಗ್ರಾಮದಲ್ಲಿ ಅಕ್ರಮ ಸಾರಾಯಿ ಮಾರಾಟ ಮಾಡುತ್ತಿದ್ದ ಬಗ್ಗೆ ಮಾಹಿತಿಯನ್ನು ನೀಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ನನ್ನನ್ನು ಘಟನಾ ಸ್ಥಳಕ್ಕೆ ಕರೆದುಕೊಂಡು ಹೋಗಿ ದಾಳಿ ಮಾಡಿ ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಹಿಡಿದು ಆತನಿಂದ ಸಾರಾಯಿ ಟೆಟ್ರಾ ಪ್ಯಾಕೇಟುಗಳನ್ನು ವಶಕ್ಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆ ವೇಳೆಗೆ ನಿಪಿ-1 ರಂತೆ ಬೆಳಿಗ್ಗೆ 7.50 ರಿಂದ 8.50 ಗಂಟೆಯ ವರೆಗೆ ಪಂಚನಾಮೆಯನ್ನು ಮಾಡಿ

ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಯು ನನಗೆ ಪರಿಚಯ ಇರುವುದರಿಂದ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿ ಪರ ವಕೀಲರಿಂದ

ಆರೋಪಿ ಪರ ವಕೀಲರಿಂದ ಇಲ್ಲ ಎಂದು ಹೇಳುತ್ತಾರೆ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಹೆ ಪ್ರ ದ ನ್ಯಾ ದಂ ನ್ಯಾ ಬೈಲಹೊಂಗಲ